507 ಶ್ರೀ ಪುಟ್ಟರಾಜು ಸಿ.ಎಸ್. (ಮೇಲುಕೋಟೆ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಂಡ್ಯ ಜಿಲ್ಲೆಯ ಮೇಲುಕೋಟೆ ವಿಧಾನ ಸಭಾ ಕ್ಷೇತ್ರದ ಪಾಂಡವಪುರದ 100 ಹಾಸಿಗೆಯುಳ್ಳ ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸಿರುವುದು ಸರಕಾರದ ಗಮನಕ್ಕೆ ಬಂದಿದೆಯೇ;

ಆ) ಸದರಿ ಆಸ್ಪತ್ರೆ ವೈದ್ಯರು ಹಾಗೂ ಇತರೆ ಸಿಬ್ಬಂದಿಗಳನ್ನು ನಿಯೋಜಿಸದಿರುವುದು ಸರಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಪೂರ್ಣ ಪ್ರಮಾಣದ ಸಿಬ್ಬಂದಿಯನ್ನು ತ್ವರಿತವಾಗಿ ಭರ್ತಿ ಮಾಡಲಾಗುವುದೇ; ಮಾಹಿತಿ ನೀಡುವುದು?

ಶ್ರೀ ಬಿ. ಶ್ರೀರಾಮುಲು (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಬಂದಿದೆ.

ಆ) ಪಾಂಡವಪುರ ಸಾರ್ವಜನಿಕ ಆಸ್ಪತ್ರೆಯನ್ನು 100 ಹಾಸಿಗೆಗಳ ಸಾಮರ್ಥ್ಯಕ್ಕೆ ಮೇಲ್ದರ್ಜೆಗೇರಿಸಿದ್ದು, ಅದಕ್ಕನುಗುಣವಾಗಿ ವೈದ್ಯರು ಹಾಗೂ ಸಿಬ್ಬಂದಿಯನ್ನು ಆದ್ಯತಾನುಸಾರ ಹಂತ-ಹಂತವಾಗಿ ನಿಯೋಜಿಸಲು ಕ್ರಮವಹಿಸಲಾಗುವುದು.

ಹಾಸ್ಟೆಲ್ ಕಟ್ಟಡ ಮಂಜೂರಾತಿ ಬಗ್ಗೆ

547 ಶ್ರೀ ರುದ್ರೇಶಗೌಡ ವೈ.ಎನ್ : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹಾಸನ ಜಿಲ್ಲೆಯ ಬೇಲೂರು ವಿಧಾನಸಭಾ ಕ್ಷೇತ್ರದಲ್ಲಿ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಮೆಟ್ರಿಕ್ ನಂತರದ ಹಾಸ್ಟೆಲ್ ಕಟ್ಟಡ ಮಂಜೂರಾಗಿರುವುದು ನಿಜವೇ;

ಆ) ಮಂಜೂರಾಗಿದ್ದಲ್ಲಿ, ಈ ಕಟ್ಟಡದ ನಿರ್ಮಾಣ ಜವಾಬ್ದಾರಿಯನ್ನು ನಿರ್ಮಿತಿ ಕೇಂದ್ರಕ್ಕೆ ವಹಿಸಿರುವುದು ನಿಜವೇ;

ಇ) ನಿರ್ಮಿತಿ ಕೇಂದ್ರಕ್ಕೆ ವಹಿಸಿದ್ದಲ್ಲಿ, ಕೇವಲ ಅರ್ಧ ಭಾಗ ಕಟ್ಟಡ ನಿರ್ಮಿಸಿ ಪೂರ್ತಿ ಹಣ ಡ್ರಾ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;